# ಕರ್ನಾಟಕ ವಿಧಾನಸಭೆ

(15ನೇ ವಿಧಾನಸಭೆ)

ಮೊದಲನೇ ಅಧಿವೇಶನ
(2ನೇ ಮುಂದುವರೆದ ಉಪವೇಶನ)

## ಕಾರ್ಯಕಲಾಪಗಳ ಪಟ್ಟಿ

ಗುರುವಾರ, ದಿನಾಂಕ 12ನೇ ಜುಲೈ, 2018

(ಸಮಯ: ಬೆಳಿಗ್ಗೆ 10.30 ಗಂಟೆಗೆ)

## 1. ವಿತ್ತೀಯ ಕಾರ್ಯಕಲಾಪಗಳು

2018-19ನೇ ಸಾಲಿನ ಆಯವ್ಯಯ ಅಂದಾಜುಗಳು ಹಾಗೂ ಬೇಡಿಕೆಗಳ ಮೇಲೆ ನಡೆದ ಚರ್ಚೆಗೆ ಸರ್ಕಾರದ ಉತ್ತರ ಹಾಗೂ ಮತಕ್ಕೆ ಹಾಕುವುದು.

## 2. ಶಾಸನ ರಚನೆ

### I. ವಿಧೇಯಕಗಳನ್ನು ಮಂಡಿಸುವುದು

**1. ಕರ್ನಾಟಕ ಧನವಿನಿಯೋಗ (ಸಂಖ್ಯೆ 2) ವಿಧೇಯಕ, 2018**
**ಶ್ರೀ ಹೆಚ್.ಡಿ. ಕುಮಾರಸ್ವಾಮಿ, (ಮುಖ್ಯಮಂತ್ರಿಗಳು) ಅವರು:-**

ಅ) 2018ನೇ ಸಾಲಿನ ಕರ್ನಾಟಕ ಧನವಿನಿಯೋಗ (ಸಂಖ್ಯೆ 2) ವಿಧೇಯಕವನ್ನು ಮಂಡಿಸಲು ಅನುಮತಿ ಕೋರುವುದು;

ಆ) ಹಾಗೂ ವಿಧೇಯಕವನ್ನು ಮಂಡಿಸುವುದು.

**2. ಕರ್ನಾಟಕ ಮೌಲ್ಯ ವರ್ಧಿತ ತೆರಿಗೆ (ತಿದ್ದುಪಡಿ) ವಿಧೇಯಕ, 2018**
**ಶ್ರೀ ಹೆಚ್.ಡಿ. ಕುಮಾರಸ್ವಾಮಿ, (ಮುಖ್ಯಮಂತ್ರಿಗಳು) ಅವರು:-**

ಅ) 2018ನೇ ಸಾಲಿನ ಕರ್ನಾಟಕ ಮೌಲ್ಯ ವರ್ಧಿತ ತೆರಿಗೆ (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ಕೋರುವುದು;

ಆ) ಹಾಗೂ ವಿಧೇಯಕವನ್ನು ಮಂಡಿಸುವುದು.

... 2/ ..

**3. ಕರ್ನಾಟಕ ವಿದ್ಯುಚ್ಛಕ್ತಿ (ಬಳಕೆ ಅಥವಾ ಮಾರಾಟದ ಮೇಲೆ ತೆರಿಗೆ ನಿರ್ಧರಣೆ) (ತಿದ್ದುಪಡಿ) ವಿಧೇಯಕ, 2018**
**ಶ್ರೀ ಹೆಚ್.ಡಿ. ಕುಮಾರಸ್ವಾಮಿ, (ಮುಖ್ಯಮಂತ್ರಿಗಳು) ಅವರು:–**

ಅ) 2018ನೇ ಸಾಲಿನ ಕರ್ನಾಟಕ ವಿದ್ಯುಚ್ಛಕ್ತಿ (ಬಳಕೆ ಅಥವಾ ಮಾರಾಟದ ಮೇಲೆ ತೆರಿಗೆ ನಿರ್ಧರಣೆ) (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ಕೋರುವುದು;

ಆ) ಹಾಗೂ ವಿಧೇಯಕವನ್ನು ಮಂಡಿಸುವುದು.

**4. ಕರ್ನಾಟಕ ಮೋಟಾರು ವಾಹನಗಳ ತೆರಿಗೆ ನಿರ್ಧರಣೆ (ತಿದ್ದುಪಡಿ) ವಿಧೇಯಕ, 2018**
**ಶ್ರೀ ಡಿ.ಸಿ. ತಮ್ಮಣ್ಣ (ಸಾರಿಗೆ ಮಂತ್ರಿಗಳು) ಅವರು:–**

ಅ) 2018ನೇ ಸಾಲಿನ ಕರ್ನಾಟಕ ಮೋಟಾರು ವಾಹನಗಳ ತೆರಿಗೆ ನಿರ್ಧರಣೆ (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ಕೋರುವುದು;

ಆ) ಹಾಗೂ ವಿಧೇಯಕವನ್ನು ಮಂಡಿಸುವುದು.

## II. <u>ವಿಧೇಯಕಗಳನ್ನು ಪರ್ಯಾಲೋಚಿಸುವುದು ಹಾಗೂ ಅಂಗೀಕರಿಸುವುದು</u>

**1. ಕರ್ನಾಟಕ ಧನವಿನಿಯೋಗ (ಸಂಖ್ಯೆ 2) ವಿಧೇಯಕ, 2018**
**ಶ್ರೀ ಹೆಚ್.ಡಿ. ಕುಮಾರಸ್ವಾಮಿ, (ಮುಖ್ಯಮಂತ್ರಿಗಳು) ಅವರು:–**

ಅ) 2018ನೇ ಸಾಲಿನ ಕರ್ನಾಟಕ ಧನವಿನಿಯೋಗ (ಸಂಖ್ಯೆ 2) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

**2. ಕರ್ನಾಟಕ ಮೌಲ್ಯ ವರ್ಧಿತ ತೆರಿಗೆ (ತಿದ್ದುಪಡಿ) ವಿಧೇಯಕ, 2018**
**ಶ್ರೀ ಹೆಚ್.ಡಿ. ಕುಮಾರಸ್ವಾಮಿ, (ಮುಖ್ಯಮಂತ್ರಿಗಳು) ಅವರು:–**

ಅ) 2018ನೇ ಸಾಲಿನ ಕರ್ನಾಟಕ ಮೌಲ್ಯ ವರ್ಧಿತ ತೆರಿಗೆ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

... 3/ ..

**3. ಕರ್ನಾಟಕ ವಿದ್ಯುಚ್ಛಕ್ತಿ (ಬಳಕೆ ಅಥವಾ ಮಾರಾಟದ ಮೇಲೆ ತೆರಿಗೆ ನಿರ್ಧರಣೆ) (ತಿದ್ದುಪಡಿ) ವಿಧೇಯಕ, 2018**
**ಶ್ರೀ ಹೆಚ್.ಡಿ. ಕುಮಾರಸ್ವಾಮಿ, (ಮುಖ್ಯಮಂತ್ರಿಗಳು) ಅವರು:-**

ಅ) 2018ನೇ ಸಾಲಿನ ಕರ್ನಾಟಕ ವಿದ್ಯುಚ್ಛಕ್ತಿ (ಬಳಕೆ ಅಥವಾ ಮಾರಾಟದ ಮೇಲೆ ತೆರಿಗೆ ನಿರ್ಧರಣೆ) (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

**4. ಕರ್ನಾಟಕ ಮೋಟಾರು ವಾಹನಗಳ ತೆರಿಗೆ ನಿರ್ಧರಣೆ (ತಿದ್ದುಪಡಿ) ವಿಧೇಯಕ, 2018**
**ಶ್ರೀ ಡಿ.ಸಿ. ತಮ್ಮಣ್ಣ (ಸಾರಿಗೆ ಮಂತ್ರಿಗಳು) ಅವರು:-**

ಅ) 2018ನೇ ಸಾಲಿನ ಕರ್ನಾಟಕ ಮೋಟಾರು ವಾಹನಗಳ ತೆರಿಗೆ ನಿರ್ಧರಣೆ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

## 3. ಪ್ರಶ್ನೋತ್ತರ

| | | |
|---|---|---|
| ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು | : | ನಾಲ್ಕನೇ ಪಟ್ಟಿ |
| ಆ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು | : | ನಾಲ್ಕನೇ ಪಟ್ಟಿ |

## 4. ಸಭೆಯ ಮುಂದಿಡಲಾಗುವ ಕಾಗದ ಪತ್ರಗಳು

**ಸದಸ್ಯರಿಗೆ ಪ್ರತ್ಯೇಕವಾಗಿ ಕಳುಹಿಸಲಾಗಿರುವ ಮೂರನೇ ಪಟ್ಟಿಯ ರೀತ್ಯಾ.**

... 4/ ..

## 5. ಅರ್ಜಿಗಳನ್ನೊಪ್ಪಿಸುವುದು

**ಶ್ರೀ ಮಹಾಂತೇಶ್ ಎಸ್. ಕೌಜಲಗಿ,** ಮಾನ್ಯ ವಿಧಾನ ಸಭಾ ಸದಸ್ಯರು, ಈ ಕೆಳಕಂಡ ಅರ್ಜಿಗಳನ್ನು ಒಪ್ಪಿಸುವುದು:

1) ಬೆಳಗಾವಿ ಜಿಲ್ಲೆ, ಬೈಲಹೊಂಗಲ ತಾಲ್ಲೂಕಿನ ದೊಡ್ಡವಾಡ ಗ್ರಾಮದಲ್ಲಿರುವ ಸರ್ಕಾರಿ ಸ್ವತಂತ್ರ ಪದವಿ ಪೂರ್ವ ಮಹಾವಿದ್ಯಾಲಯದ ಶಿಥಿಲಗೊಂಡಿರುವ ಕಟ್ಟಡವನ್ನು ದುರುಸ್ಥಿಗೊಳಿಸುವ ಬಗ್ಗೆ.

2) ಬೆಳಗಾವಿ ಜಿಲ್ಲೆ, ಬೈಲಹೊಂಗಲ ತಾಲ್ಲೂಕಿನ ಅಮಟೂರ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಬರುವ ದೇವಲಾಪೂರ ವಿಸ್ತರಣೆ ಪ್ರದೇಶದ ಜೈನ ಬಸ್ತಿಯ ಬಳಿ ಇರುವ ಹೊಲಕ್ಕೆ ಸಂಪರ್ಕ ಕಲ್ಪಿಸುವ ರಸ್ತೆಯನ್ನು ದುರಸ್ಥಿಗೊಳಿಸುವ ಬಗ್ಗೆ.

3) ಬೆಳಗಾವಿ ಜಿಲ್ಲೆ, ಬೈಲಹೊಂಗಲ ತಾಲ್ಲೂಕಿನ ಕೊರವಿಕೊಪ್ಪ ಗ್ರಾಮದ ಶ್ರೀ ಹನಮಂತದೇವರ ಗುಡಿಯಿಂದ ಸ್ಮಶಾನದವರೆಗೆ ಸಂಪರ್ಕ ಕಲ್ಪಿಸುವ ರಸ್ತೆಯನ್ನು ದುರಸ್ಥಿಗೊಳಿಸುವ ಬಗ್ಗೆ.

4) ಬೆಳಗಾವಿ ಜಿಲ್ಲೆ, ಸವದತ್ತಿ ತಾಲ್ಲೂಕಿನ ಮುರಗೋಡ ಗ್ರಾಮದಲ್ಲಿ ಶಿಥಿಲಗೊಂಡಿರುವ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಕಟ್ಟಡವನ್ನು ದುರಸ್ಥಿಗೊಳಿಸುವ ಬಗ್ಗೆ.

## 6. ನಿಯಮ 69ರ ಮೇರೆಗೆ ಸಾರ್ವಜನಿಕ ಮಹತ್ವದ ಜರೂರು ವಿಷಯದ ಬಗ್ಗೆ ಅಲ್ಪ ಕಾಲಾವಧಿ ಚರ್ಚೆ

1) **ಶ್ರೀಯುತರುಗಳಾದ ಆರ್. ಅಶೋಕ್, ವಿ. ಸುನಿಲ್ ಕುಮಾರ್, ಸಿ.ಟಿ. ರವಿ, ಅರವಿಂದ ಲಿಂಬಾವಳಿ, ವಿ. ಸೋಮಣ್ಣ, ಡಾ. ಭರತ್ ಶೆಟ್ಟಿ ಮತ್ತು ರಾಜೇಶ್ ನಾಯಕ್** ಇವರುಗಳು ಬೆಂಗಳೂರು ನಗರ ಸೇರಿದಂತೆ ರಾಜ್ಯಾದ್ಯಂತ ಡ್ರಗ್ಸ್, ಗಾಂಜಾ ಮತ್ತಿತರ ಮಾದಕ ವಸ್ತುಗಳಿಗೆ ಯುವಜನತೆ ಬಲಿಯಾಗುತ್ತಿರುವುದರಿಂದ, ವೈದ್ಯರ ಚೀಟಿ ಇಲ್ಲದೇ ಅಮಲುಮಿಶ್ರಿತ ಔಷಧ ಸೇರಿದಂತೆ, ಮಾತ್ರೆ, ಇಂಜೆಕ್ಷನ್‌ಗಳನ್ನು ಮಾರಾಟ ಮಾಡುತ್ತಿರುವ ಔಷಧಿ ಅಂಗಡಿಗಳಿಗೆ ಕಡಿವಾಣ ಹಾಕುವುದರ ಬಗ್ಗೆ ಚರ್ಚಿಸಲು ನೀಡಿರುವ ಸೂಚನೆಯ ಮೇಲೆ ಚರ್ಚೆ.

... 5/ ..

2) **ಶ್ರೀಯುತರುಗಳಾದ ಎ.ಟಿ. ರಾಮಸ್ವಾಮಿ, ಸಿ.ಎನ್. ಬಾಲಕೃಷ್ಣ, ಕೆ.ಎಂ. ಶಿವಲಿಂಗೇಗೌಡ, ಎಂ. ಶ್ರೀನಿವಾಸ ಮತ್ತು ಕೆ. ಮಹದೇವ** ಇವರುಗಳು ಕೇಂದ್ರ ಸರ್ಕಾರವು ರಚಿಸಿರುವ ಕಾವೇರಿ ನಿರ್ವಹಣಾ ಪ್ರಾಧಿಕಾರ ಮತ್ತು ಕಾವೇರಿ ಜಲನಿಯಂತ್ರಣ ಸಮಿತಿಗಳು ಕರ್ನಾಟಕ ಕಾವೇರಿ ನೀರಾವರಿ ಯೋಜನೆಗಳಲ್ಲಿ ನೀರು ಸಂಗ್ರಹಣೆ, ಹಂಚಿಕೆ ಮತ್ತು ಬೆಳೆ ಬೆಳೆಯುವ ಬಗ್ಗೆ ನಿಗಾ ವಹಿಸುವುದರಿಂದ ಮೈಸೂರು, ಚಾಮರಾಜನಗರ, ಮಂಡ್ಯ, ಕೊಡಗು, ಹಾಸನ, ಬೆಂಗಳೂರು ಮತ್ತು ತುಮಕೂರು ಜಿಲ್ಲೆಗಳಲ್ಲಿನ ರೈತರಿಗೆ ಅನ್ಯಾಯವಾಗುತ್ತಿರುವ ಬಗ್ಗೆ ಪ್ರಸ್ತಾಪಿಸಲು ನೀಡಿರುವ ಸೂಚನೆಯ ಮೇಲೆ ಚರ್ಚೆ.

3) **ಶ್ರೀಯುತರುಗಳಾದ ಟಿ.ಡಿ. ರಾಜೇಗೌಡ, ಈ. ತುಕಾರಾಂ ಮತ್ತು ಅರ್ಬೆಲ್ ಶಿವರಾಂ ಹೆಬ್ಬಾರ್** ಇವರುಗಳು 2019ರ ಶೈಕ್ಷಣಿಕ ವರ್ಷದಲ್ಲಿ ನೀಟ್ ಮತ್ತು ಜೆಇಇ ಪರೀಕ್ಷೆಗಳು ಆನ್‌ಲೈನ್ ಮೂಲಕ ನಡೆಯುವುದರಿಂದ, ರಾಜ್ಯದ ವಿದ್ಯಾರ್ಥಿಗಳು ಮತ್ತು ಗ್ರಾಮೀಣ ಭಾಗದ ವಿದ್ಯಾರ್ಥಿಗಳ ಹಿತದೃಷ್ಟಿಯಿಂದ ಸರ್ಕಾರ ಮಾಡಿಕೊಂಡಿರುವ ಸಿದ್ಧತೆ ಬಗ್ಗೆ ಪ್ರಸ್ತಾಪಿಸಲು ನೀಡಿರುವ ಸೂಚನೆಯ ಮೇಲೆ ಚರ್ಚೆ.

## 7. ಗಮನ ಸೆಳೆಯುವ ಸೂಚನೆಗಳು

1) **ಶ್ರೀ ಪಿ. ರಾಜೀವ್** ಅವರು ರಾಯಭಾಗ ತಾಲ್ಲೂಕಿನಲ್ಲಿರುವ ಜೈನ ಸಮುದಾಯದವರಿಗೆ ಅಲ್ಪ ಸಂಖ್ಯಾತರ ಪ್ರಮಾಣ ಪತ್ರ ನೀಡುವ ಕುರಿತು ಮಾನ್ಯ ಕಂದಾಯ ಹಾಗೂ ಕೌಶಲ್ಯ ಅಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರ ಗಮನ ಸೆಳೆಯುವುದು.

2) **ಶ್ರೀ ಗೂಳಿಹಟ್ಟಿ ಡಿ. ಶೇಖರ್** ಅವರು ಚಿತ್ರದುರ್ಗ, ತುಮಕೂರು ಹಾಗೂ ಹಾಸನ ಜಿಲ್ಲಾ ಪಂಚಾಯತ್ ವ್ಯಾಪ್ತಿಯಲ್ಲಿ ಯುವಕ-ಯುವತಿಯರಿಗೆ ಕಂಪ್ಯೂಟರ್ ತರಬೇತಿ ನೀಡದೆ ಬಿ.ಆರ್.ಜಿ.ಎಫ್. ಅನುದಾನದ ಕೋಟ್ಯಾಂತರ ರೂಪಾಯಿಗಳನ್ನು ದುರುಪಯೋಗ ಪಡಿಸಿಕೊಂಡಿರುವ ಬಗ್ಗೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರ ಗಮನ ಸೆಳೆಯುವುದು.

... 6/ ..

3) **ಶ್ರೀ ಅರವಿಂದ ಚಂದ್ರಕಾಂತ ಬೆಲ್ಲದ** ಅವರು ಹುಬ್ಬಳ್ಳಿ-ಧಾರವಾಡ ಮಧ್ಯೆ ನಡೆಯುತ್ತಿರುವ ಬಿ.ಆರ್.ಟಿ.ಎಸ್. ರಸ್ತೆ ಕಾಮಗಾರಿಯು 5-6 ವರ್ಷಗಳಿಂದ ಮಂದಗತಿಯಲ್ಲಿ ನಡೆಯುತ್ತಿರುವುದರಿಂದ, ಸರಾಗ ವಾಹನ ಸಂಚಾರಕ್ಕೆ ಅಡಚಣೆ ಉಂಟಾಗುತ್ತಿದ್ದು, ಕಾಮಗಾರಿಯು ಮಂದಗತಿಯಲ್ಲಿ ನಡೆಯಲು ಕಾರಣರಾದ ಅಧಿಕಾರಿ ಮತ್ತು ಗುತ್ತಿಗೆದಾರರ ಮೇಲೆ ಶಿಸ್ತು ಕ್ರಮಕೈಗೊಳ್ಳುವಂತೆ ಮಾನ್ಯ ವಸತಿ ಮತ್ತು ನಗರಾಭಿವೃದ್ಧಿ ಸಚಿವರ ಗಮನ ಸೆಳೆಯುವುದು.

4) **ಶ್ರೀ ಸಿ.ಎನ್. ಬಾಲಕೃಷ್ಣ** ಅವರು ಗ್ರಾಮೀಣ ಪ್ರದೇಶಗಳಲ್ಲಿ ಸೇವೆ ಸಲ್ಲಿಸುತ್ತಿರುವ ತಜ್ಞ ವೈದ್ಯರುಗಳು ಹತ್ತು ವರ್ಷ ಸೇವೆ ಸಲ್ಲಿಸುವುದಾಗಿ ಸರ್ಕಾರಕ್ಕೆ ಮುಚ್ಚಳಿಕೆ ಬರೆದುಕೊಟ್ಟಿದ್ದರೂ ಅವರುಗಳನ್ನು ಆದ್ಯತೆಯ ಮೇರೆಗೆ ಸ್ಥಳ ನಿಯುಕ್ತಿಗೊಳಿಸದೇ ಕೆ.ಪಿ.ಎಸ್.ಸಿ. ಮುಖಾಂತರ ಹೊಸದಾಗಿ ವೈದ್ಯರುಗಳ ನೇಮಕಾತಿ ಪ್ರಕ್ರಿಯೆಯನ್ನು ಕೈಗೊಂಡಿರುವ ಬಗ್ಗೆ ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರ ಗಮನ ಸೆಳೆಯುವುದು.

5) **ಶ್ರೀ ಎಸ್.ಎನ್. ಸುಬ್ಬಾರೆಡ್ಡಿ** ಅವರು ಬಾಗೇಪಲ್ಲಿ ವಿಧಾನಸಭಾ ಕ್ಷೇತ್ರಕ್ಕೆ ಬಯಲುಸೀಮೆ ಪ್ರದೇಶಾಭಿವೃದ್ಧಿ ಮಂಡಳಿಯ ವತಿಯಿಂದ 2016-17 ಮತ್ತು 2017-18ನೇ ಸಾಲಿನಲ್ಲಿ ಮಂಜೂರಾದ ಅನುದಾನದಲ್ಲಿ ಕಳಪೆ ಕಾಮಗಾರಿ ಮತ್ತು ಅನುದಾನ ದುರ್ಬಳಕೆ ಆಗಿರುವ ಬಗ್ಗೆ ಸೂಕ್ತ ತನಿಖೆ ನಡೆಸುವ ಕುರಿತು ಮಾನ್ಯ ಮುಖ್ಯಮಂತ್ರಿಗಳ ಗಮನ ಸೆಳೆಯುವುದು.

6) **ಶ್ರೀ ಸಿದ್ದು ಸವದಿ** ಅವರು ರಾಜ್ಯದ ರೈತರ ಸಾಲ ಮನ್ನಾ ಮಾಡಿರುವ ರೀತಿ ನೇಕಾರರ ಸಮುದಾಯದ ಸಾಲವನ್ನು ಮನ್ನಾ ಮಾಡುವ ಕುರಿತು ಮಾನ್ಯ ಮುಖ್ಯಮಂತ್ರಿಗಳ ಗಮನ ಸೆಳೆಯುವುದು.

7) **ಶ್ರೀ ರಾಜಕುಮಾರ ಪಾಟೀಲ್** ಅವರು ಸರ್ಕಾರ ರಚನೆಯಾಗಿ 2 ತಿಂಗಳು ಕಳೆದರೂ ಸಹ ಜಿಲ್ಲಾ ಉಸ್ತುವಾರಿ ಸಚಿವರ ನೇಮಕ ಮಾಡದಿರುವುದರಿಂದ ಜಿಲ್ಲೆಗಳಲ್ಲಿನ ಅಭಿವೃದ್ಧಿ ಕೆಲಸಗಳು ಕುಂಠಿತಗೊಂಡಿರುವ ಬಗ್ಗೆ ಮಾನ್ಯ ಮುಖ್ಯಮಂತ್ರಿಗಳ ಗಮನ ಸೆಳೆಯುವುದು.

8) **ಶ್ರೀ ಎಸ್.ಎನ್. ಸುಬ್ಬಾರೆಡ್ಡಿ** ಅವರು ಬಾಗೇಪಲ್ಲಿ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಎಗವಮದ್ದಲಖಾನೆ ಕೆರೆಯ ಹತ್ತಿರ ಕಟ್ಟುಕಾಲುವೆ ಅಭಿವೃದ್ಧಿ ಮತ್ತು ಗುಡಿಬಂಡೆ ತಾಲ್ಲೂಕು ಚೆಂಡೂರು ಗ್ರಾಮದ ಕಾಲುವೆ ದುರಸ್ತಿ ಮತ್ತು ಚೆಕ್ ಡ್ಯಾಂ ನಿರ್ಮಾಣ ಕಾಮಗಾರಿಗಳನ್ನು ಪೂರ್ಣಗೊಳಿಸದೇ ರೈತರಿಗೆ ಅನ್ಯಾಯ ಮಾಡುತ್ತಿರುವ ಗುತ್ತಿಗೆದಾರರ ವಿರುದ್ಧ ಕ್ರಮಕೈಗೊಳ್ಳುವ ಬಗ್ಗೆ ಮಾನ್ಯ ಸಣ್ಣ ನೀರಾವರಿ ಸಚಿವರ ಗಮನ ಸೆಳೆಯುವುದು.

... 7/ ..

9) **ಶ್ರೀ ಬಿ. ಶ್ರೀರಾಮುಲು** ಅವರು ಮೊಣಕಾಲ್ಮೂರು ವಿಧಾನಸಭಾ ಕ್ಷೇತ್ರದಲ್ಲಿ ಕುಡಿಯುವ ನೀರಿನ ಸಮಸ್ಯೆ ತೀವ್ರವಾಗಿರುವುದರಿಂದ, ತಾತ್ಕಾಲಿಕವಾಗಿ ಪ್ರತಿ ಹಳ್ಳಿಗೆ 2 ರಿಂದ 3 ಕೊಳವೆ ಬಾವಿಗಳನ್ನು ಕೊರೆಸುವ ಬಗ್ಗೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಕಾನೂನು, ಸಂಸದೀಯ ವ್ಯವಹಾರಗಳ ಸಚಿವರ ಗಮನ ಸೆಳೆಯುವುದು.

10) **ಶ್ರೀ ಎಂ.ಪಿ. ಅಪ್ಪಚ್ಚು ರಂಜನ್** ಅವರು ಕೊಡಗು ಜಿಲ್ಲೆ ಸೋಮವಾರಪೇಟೆ ತಾಲ್ಲೂಕು, ಶನಿವಾರ ಸಂತೆ ಹೋಬಳಿ, ನಿಡ್ತ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಬರುವ ವಡೆಯನಪುರ ಗ್ರಾಮದ ಸರ್ವೆ ನಂ. 124/1ರಲ್ಲಿ 44.38 ಎಕರೆ ಜಾಗದಲ್ಲಿ ವಸತಿ ರೈತರಿಗೆ ಆಶ್ರಯ ಯೋಜನೆಯಡಿ ನಿವೇಶನ ಹಂಚಿಕೆ ಮಾಡಲು ಭೂಮಿಯನ್ನು ಕಾಯ್ದಿರಿಸಲು ಕ್ರಮ ಕೈಗೊಳ್ಳುವ ಬಗ್ಗೆ ಮಾನ್ಯ ಕಂದಾಯ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲನೆ ಮತ್ತು ಜೀವನೋಪಾಯ ಸಚಿವರ ಗಮನ ಸೆಳೆಯುವುದು.

**ಎಸ್. ಮೂರ್ತಿ**
**ಕಾರ್ಯದರ್ಶಿ.**

---

**ವಿಧಾನಸಭೆಯ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.**
http://kla.kar.nic.in/assembly/lob/lob.htm